**ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.ರವರ ನ್ಯಾಯಾಲಯ, ಶ್ರೀರಂಗಪಟ್ಟಣ.**

**ಕ್ರಿಮಿನಲ್ ಮೊಕದ್ದಮೆ ಸಂಖ್ಯೆ : 8/2022**

**ಚಾ.ಸಾ. :- 13**
**ಪ್ರಾ.ಸಾ. :- 03**

| | | |
|---|---|---|
| ಹೆಸರು | : | ವಿವೇಕಾನಂದ.ಹೆಚ್.ಆರ್ |
| ತಂದೆಯ ಹೆಸರು | : | ಡಿ.ರಾಮಲಿಂಗಯ್ಯ |
| ವಯಸ್ಸು | : | 48 ವರ್ಷ |
| ಉದ್ಯೋಗ | : | ವೃತ್ತ ನಿರೀಕ್ಷಕರು, ಕೆ.ಆರ್.ಸಾಗರ ವೃತ್ತ |
| ವಾಸಸ್ಥಳ | : | ಶ್ರೀರಂಗಪಟ್ಟಣ. |

**ಪ್ರಮಾಣೀಕರಿಸಲಾದ ದಿನಾಂಕಃ- 28.04.2026.**

**ಮುಖ್ಯ ವಿಚಾರಣೆ : ಮಾನ್ಯ ಸ.ಸ.ಅ.ರವರಿಂದ :**

ನಾನು ದಿನಾಂಕಃ 29.03.2021 ರಿಂದ 19.07.2022 ರ ಅವಧಿಯಲ್ಲಿ ಶ್ರೀರಂಗಪಟ್ಟಣ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪಿ.ಐ.ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕಃ 14.04.2021 ರಂದು ನಾನು ಚಾ.ಸಾ-12 ರವರಿಂದ ಕಡತವನ್ನು ಸ್ವೀಕರಿಸಿ ತನಿಖೆ ಮುಂದುವರೆಯಿಸಿರುತ್ತೇನೆ.

ಚಾ.ಸಾ-1 ರಿಂದ 3 ರವರ ಹೇಳಿಕೆಗಳನ್ನು ದಾಖಲು ಮಾಡಿಕೊಂಡಿರುತ್ತೇನೆ.

FSL ನಿಂದ ಮೃತರ ರಕ್ತ ಪರೀಕ್ಷಾ ವರದಿಯನ್ನು ಸ್ವೀಕರಿಸಿರುತ್ತೇನೆ. ಸದರಿ ದಾಖಲೆಯನ್ನು ಈಗ ನೋಡುತ್ತಿದ್ದು, ಅದನ್ನು ನಿಪಿ-3 ಎಂದು ಗುರುತಿಸಲಾಯಿತು.

ಮೃತರ ಪಿ.ಎಂ.ವರದಿಯನ್ನು ಸ್ವೀಕರಿಸಿ ಕಡತಕ್ಕೆ ಲಗತ್ತಿಸಿಕೊಂಡಿರುತ್ತೇನೆ. ಸದರಿ ವರದಿಯನ್ನು ಈಗ ನೋಡುತ್ತಿದ್ದು, ಅದನ್ನು ನಿಪಿ-4 ಎಂದು ಗುರುತಿಸಲಾಯಿತು.

ನಂತರ ಅಪಘಾತಪಡಿಸಿದ ವಾಹನದ ಮಾಲೀಕರಿಗೆ ಐ.ಎಂ.ವಿ.ಕಾಯ್ದೆಯಡಿ ನೋಟೀಸ್ ನೀಡಿ ಉತ್ತರ ಪಡೆದಿರುತ್ತೇನೆ. ಸದರಿ ನೋಟೀಸ್ ಮತ್ತು ಉತ್ತರವನ್ನು ಈಗ ನೋಡುತ್ತಿದ್ದು, ಅವುಗಳನ್ನು ನಿಪಿ-5 ಮತ್ತು 6 ಎಂದು ಗುರುತಿಸಲಾಯಿತು. ಆರ್.ಟಿ.ಓ.ಅಧಿಕಾರಿಗಳು ವಾಹನವನ್ನು ಪರಿಶೀಲಿಸಿದ ನಂತರ ವಾಹನವನ್ನು ಬಾಂಡ್ ಪಡೆದು ಬಿಡುಗಡೆ ಮಾಡಿರುತ್ತೇನೆ. ಸದರಿ ವಾಹನದ 4 ಫೋಟೋಗಳನ್ನು ಈಗ ನೋಡುತ್ತಿದ್ದು ಅದನ್ನು ಒಟ್ಟಾಗಿ ನಿಪಿ-7 ಎಂದು ಗುರುತಿಸಲಾಯಿತು.

ಅಪಘಾತಕ್ಕೆ ಸಂಬಂಧಿಸಿದಂತೆ ವಾಹನವನ್ನು ಪರಿಶೀಲನೆ ಮಾಡಿ ಐ.ಎಂ.ವಿ.ವರದಿ ಸಲ್ಲಿಸುವಂತೆ ಆರ್.ಟಿ.ಓ.ರವರಿಗೆ ಮನವಿ ಸಲ್ಲಿಸಿ, ನಂತರದಲ್ಲಿ ವರದಿಯನ್ನು ಪಡೆದುಕೊಂಡಿರುತ್ತೇನೆ. ಸದರಿ ಐ.ಎಂ.ವಿ.ವರದಿಯನ್ನು ಈಗ ನೋಡುತ್ತಿದ್ದು, ಅದನ್ನು ನಿಪಿ-8 ಎಂದು ಗುರುತಿಸಲಾಯಿತು.

ಆರೋಪಿಯ ಗಾಯದ ಪ್ರಮಾಣ ಪತ್ರವನ್ನು ಸ್ವೀಕರಿಸಿರುತ್ತೇನೆ. ಅದನ್ನು ನಿಪಿ-9 ಎಂದು ಗುರುತಿಸಲಾಯಿತು.

ಆರೋಪಿತರು ಠಾಣೆಗೆ ಹಾಜರಾಗಿದ್ದು, ಅವರಿಗೆ ನೋಟೀಸ್ ಜಾರಿ ಮಾಡಿ ಬಾಂಡ್ ಪಡೆದು ಜಾಮೀನಿನ ಮೇಲೆ ಅವರನ್ನು ಬಿಡುಗಡೆ ಮಾಡಿರುತ್ತೇನೆ.

ತನಿಖಾ ಸಮಯದಲ್ಲಿ ಸಾಕ್ಷಿದಾರರ ಹೇಳಿಕೆ ದಾಖಲು ಮಾಡಿಕೊಂಡಿರುತ್ತೇನೆ.

ನಂತರ ಪ್ರಕರಣದ ತನಿಖೆ ಪೂರ್ಣಗೊಂಡಿದ್ದರಿಂದ ನ್ಯಾಯಾಲಯಕ್ಕೆ ಅಂತಿಮ ವರದಿ ಸಲ್ಲಿಸಿರುತ್ತೇನೆ.

**<u>ಪಾಟೀ ಸವಾಲು : ಆರೋಪಿತರ ಪರ ವಕೀಲರಿಂದ :</u>**

ವೈದ್ಯಕೀಯ ದಾಖಲೆಗಳಲ್ಲಿ ಅಪಘಾತಪಡಿಸಿದ ವಾಹನದ ಸಂಖ್ಯೆ ನಮೂದಾಗಿಲ್ಲ ಎಂದರೆ ಸರಿ. ವಾಹನಕ್ಕೆ ಮೇಲ್ನೋಟಕ್ಕೆ ಕಾಣುವಂತಹ ಜಖಂ ಆಗಿಲ್ಲ ಎಂದರೆ ಸರಿ. ಕಚ್ಚಾ ನಕಾಶೆ ಹಾಗೂ ಫೋಟೋ ಪ್ರಕಾರ ಅಪಘಾತ ರಸ್ತೆಯ ಮಧ್ಯೆ ಆಗಿರುತ್ತದೆ ಎಂದರೆ ಸಾಕ್ಷಿ ಅದು ಚಾ.ಸಾ-12 ರವರಿಗೆ ಗೊತ್ತಿರುತ್ತದೆ. FSL ವರದಿಯನ್ನು ಪ್ರಕರಣಕ್ಕೆ ಅನುಕೂಲವಾಗುವಂತೆ ಪಡೆದಿರುತ್ತೇನೆ ಎಂದರೆ ಸರಿಯಲ್ಲ.

ತನಿಖಾ ಸಮಯದಲ್ಲಿ ಆರೋಪಿಯ ತಪ್ಪು ಇರುವುದಿಲ್ಲವೆಂದು ಕಂಡು ಬಂದಿರುತ್ತದೆ ಎಂದರೆ ಸರಿಯಲ್ಲ. ಮೃತರ ತಪ್ಪಿನಿಂದಲೇ ಅಪಘಾತವಾಗಿರುತ್ತದೆ ಎಂದರೆ ಸರಿಯಲ್ಲ. ಆರೋಪಿತರು ಯಾವುದೇ ತಪ್ಪು ಮಾಡದಿದ್ದರೂ ದೂರುದಾರರ ಕುಟುಂಬಕ್ಕೆ ವಿಮೆ ಪರಿಹಾರ ಕೊಡಿಸುವ ಸಲುವಾಗಿ ಸುಳ್ಳು ದಾಖಲಾತಿ ಸೃಷ್ಟಿಸಿ, ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ :- ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಈ ದಿನ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಓದಲಾಗಿದೆ.

**ಪ್ರಧಾನ ಹಿರಿಯ ಸಿಜೆ ಮತ್ತು**
**ಜೆ.ಎಂ.ಎಫ್.ಸಿ., ಶ್ರೀರಂಗಪಟ್ಟಣ.**

**ಸಾಕ್ಷಿದಾರರ ಸಹಿ.**